**Akashvani : Bangalore**
**Regional Bulletin In Kannada**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**17.05.2026 / 18.40 hrs**
*******************

ಮುಖ್ಯಾಂಶಗಳು

**೧. ಬೆಂಗಳೂರು-ಮುಂಬೈ ನಡುವೆ ಅತಿವೇಗದ ರೈಲು ಕಾರಿಡಾರ್ ಯೋಜನೆ ಮಂಜೂರಾತಿಗೆ ಕೇಂದ್ರ ರೈಲ್ವೆ ಸಚಿವರಲ್ಲಿ ಸಂಸದ ತೇಜಸ್ವಿ ಸೂರ್ಯ ಮನವಿ**

**೨. ಮಂಗಳೂರಿನಲ್ಲಿ ಗೇರು ಮೇಳಕ್ಕೆ ಸಚಿವ ಈಶ್ವರ್ ಬಿ. ಖಂಡ್ರೆ ಚಾಲನೆ ; ಕಾಡಿನಿಂದ ಹೊರಬಂದ ಐದು ಕುಟುಂಬಗಳಿಗೆ ಪರಿಹಾರ ಚೆಕ್ ವಿತರಣೆ**

**೩.ಜಾಗತಿಕ ವಿದ್ಯಮಾನಗಳಿಂದಾಗಿ ತೈಲ ಬೆಲೆಯಲ್ಲಿ ಏರಿಕೆ ; ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಸಮರ್ಥನೆ**

**೪. ಯುವಪ್ರತಿಭೆಗಳು ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಉತ್ತಮ ಕ್ರೀಡಾಪಟುಗಳಾಗಿ ಬೆಳೆಯಬೇಕು - ಸಚಿವ ಎಂ.ಬಿ. ಪಾಟೀಲ್ ಆಶಯ**

****************

ದಾವಣಗೆರೆ, ಹುಬ್ಬಳ್ಳಿ-ಧಾರವಾಡ ಮತ್ತು ಬೆಳಗಾವಿ ಮಾರ್ಗವಾಗಿ ಬೆಂಗಳೂರು ಹಾಗೂ ಮುಂಬೈ ನಗರಗಳ ನಡುವೆ ಅತಿವೇಗದ ಅಥವಾ ಬುಲೆಟ್ ರೈಲು ಕಾರಿಡಾರ್ ಯೋಜನೆಯನ್ನು ಮಂಜೂರು ಮಾಡುವಂತೆ ಸಂಸದ ತೇಜಸ್ವಿ ಸೂರ್ಯ, ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರನ್ನು ವಿನಂತಿಸಿದ್ದಾರೆ. ಎಸ್ಎಂವಿಟಿ ಬೆಂಗಳೂರು - ಲೋಕಮಾನ್ಯ ತಿಲಕ್ ಟರ್ಮಿನಸ್ ಮುಂಬೈ ನಡುವಿನ ನೂತನ ನೇರ ರೈಲು ಸೇವೆಗೆ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹಾಗೂ ರೈಲ್ವೆ ರಾಜ್ಯ ಸಚಿವ ವಿ. ಸೋಮಣ್ಣ ಅವರೊಂದಿಗೆ ವರ್ಚುವಲ್ ಆಗಿ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯ ೧ ಟ್ರಿಲಿಯನ್ ಡಾಲರ್ ಆರ್ಥಿಕತೆಯಾಗಬೇಕಾದರೆ ಉತ್ತರ ಮತ್ತು ಮಧ್ಯ ಕರ್ನಾಟಕವನ್ನು ಹಿಂದೆ ಬಿಡಲು ಸಾಧ್ಯವಿಲ್ಲ ಎಂದು ಪ್ರತಿಪಾದಿಸಿದರು. ಕೆಲವೇ ವರ್ಷಗಳಲ್ಲಿ ಉತ್ತರ ಕರ್ನಾಟಕ ಭಾಗವು ರಾಜ್ಯದ ಮುಂದಿನ ಹಂತದ ಬೆಳವಣಿಗೆಗೆ ದಿಕ್ಸೂಚಿಯಾಗಬಲ್ಲ ಎಲ್ಲ ಅನುಕೂಲಗಳನ್ನು ಪಡೆಯಲಿದ್ದು, ಈ ಭಾಗಕ್ಕೆ ಕ್ಷಿಪ್ರ ಸಂಪರ್ಕ

ಕಲ್ಪಿಸುವುದು ಉದ್ಯೋಗ, ಉದ್ಯಮ, ಹೂಡಿಕೆ ಮತ್ತು ಅವಕಾಶಗಳ ವಿಷಯದಲ್ಲಿ ಅತ್ಯಂತ ಮಹತ್ವದ ಬದಲಾವಣೆಯನ್ನು ತರಲಿದೆ. ಕರ್ನಾಟಕದ ಬೆಳವಣಿಗೆಯ ಇತಿಹಾಸದಲ್ಲಿ ಉತ್ತರ ಕರ್ನಾಟಕವು ತನ್ನ ಅರ್ಹವಾದ ಪಾಲನ್ನು ಪಡೆಯಲೇಬೇಕಿದೆ ಎಂದು ಅವರು ಅಭಿಪ್ರಾಯಪಟ್ಟರು. ಇಂದು ಬೆಳಗ್ಗೆ ವರ್ಚುವಲ್ ಮೂಲಕ ರೈಲು ಸೇವೆಗೆ ಚಾಲನೆ ನೀಡುವ ವೇಳೆ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್, ಬೆಂಗಳೂರು ಮುಂಬೈ ನಡುವೆ ವಂದೇ ಭಾರತ್ ಸ್ಲೀಪರ್ ರೈಲು ಸೇವೆ ಶೀಘ್ರದಲ್ಲೇ ಆರಂಭವಾಗಲಿದೆ ಎಂದು ಘೋಷಿಸಿದರು.

***************

ಮಂಗಳೂರಿನಲ್ಲಿ ಇಂದು ನಡೆದ 'ಗೇರು ಮೇಳ'ದಲ್ಲಿ ಅರಣ್ಯ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ಅವರು ಭಾಗವಹಿಸಿ, ಕಾಡಿನಿಂದ ಸ್ವಯಂಪ್ರೇರಿತರಾಗಿ ಹೊರಬಂದ ೫ ಕುಟುಂಬಗಳಿಗೆ ೨.೩೮ ಕೋಟಿ ರೂಪಾಯಿ ಪರಿಹಾರದ ಚೆಕ್ ವಿತರಿಸಿದರು. ಕುದುರೆಮುಖ ರಾಷ್ಟ್ರೋತ್ಥಾನ ಪುನರ್ವಸತಿ ಯೋಜನೆಯಡಿ ಕುಟುಂಬಗಳ ಹಂತ ಹಂತದ ಸ್ಥಳಾಂತರಕ್ಕಾಗಿ ಹೆಚ್ಚುವರಿಯಾಗಿ ೨೦ ಕೋಟಿ ರೂಪಾಯಿ ಅನುದಾನ ಪ್ರಕಟಿಸಿದ ಸಚಿವರು, ಇತ್ತೀಚೆಗೆ ಆನೆ ದಾಳಿಗೆ ಮೃತಪಟ್ಟ ಕೆರೆಕಟ್ಟೆಯ ಮುಡಬಿ ನಿವಾಸಿಯ ಕುಟುಂಬದ ಇಬ್ಬರಿಗೆ ಮಾನವೀಯ ನೆಲೆಯಲ್ಲಿ ಅರಣ್ಯ ಇಲಾಖೆಯಲ್ಲಿ ಹೊರಗುತ್ತಿಗೆ ಉದ್ಯೋಗ ನೀಡಲಾಗಿದೆ ಎಂದರು. ರಾಜ್ಯವನ್ನು ಗೇರು ಉತ್ಪಾದನೆಯಲ್ಲಿ ಸ್ವಾವಲಂಬಿಯನ್ನಾಗಿ ಮಾಡಲು ಮತ್ತು ರೈತರಿಗೆ ರಿಯಾಯಿತಿ ದರದಲ್ಲಿ ಗುಣಮಟ್ಟದ ಕಸಿ ಸಸಿಗಳನ್ನು ಪೂರೈಸಲು ಗೇರು ಅಭಿವೃದ್ಧಿ ನಿಗಮಕ್ಕೆ ೧ ಕೋಟಿ ರೂಪಾಯಿ ಅನುದಾನವನ್ನು ಸಚಿವರು ಇದೇ ಸಂದರ್ಭದಲ್ಲಿ ಘೋಷಿಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವ ಸಂಪುಟ ಪುನರ್ರಚನೆ ಮಾಡುವುದು ಮುಖ್ಯಮಂತ್ರಿ ಮತ್ತು ಪಕ್ಷದ ವರಿಷ್ಠರ ನಿರ್ಧಾರವಾಗಿದ್ದು, ಯಾವುದೇ ತೀರ್ಮಾನಕ್ಕೆ ತಾವು ಬದ್ಧರಾಗಿರುವುದಾಗಿ ತಿಳಿಸಿದರು.

***************

ವಿಶ್ವದ ಇತರ ಮುಂದುವರಿದ ರಾಷ್ಟ್ರಗಳಿಗೆ ಹೋಲಿಸಿದರೆ ಭಾರತದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ನಿಯಂತ್ರಣದಲ್ಲಿದೆ ಎಂದು ಕೇಂದ್ರ ಭಾರೀ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ ಸಮರ್ಥಿಸಿಕೊಂಡಿದ್ದಾರೆ. ಮೈಸೂರಿನ ಚಾಮುಂಡೇಶ್ವರಿ ಕ್ಷೇತ್ರದಲ್ಲಿ ನಡೆದ ಜನರೊಂದಿಗೆ ಜನತಾದಳ ಸಮಾವೇಶದಲ್ಲಿ ಮಾತನಾಡಿದ ಅವರು, ಇರಾನ್ ಮೇಲಿನ ಯುದ್ಧದಿಂದಾಗಿ ಜಾಗತಿಕ ಮಟ್ಟದಲ್ಲಿ ಎದುರಾಗಿರುವ ತೈಲ ಸಬರಾಜು ಬಿಕ್ಕಟ್ಟು ಇಂಧನ ಬೆಲೆ ಏರಿಕೆಗೆ ಪ್ರಮುಖ ಕಾರಣವಾಗಿದೆ ಎಂದು ವಿಶ್ಲೇಷಿಸಿದರು. ಇದೇ ವೇಳೆ ಮುಂಬರುವ ೨೦೨೮ರ

ವಿಧಾನಸಭಾ ಚುನಾವಣೆಯಲ್ಲಿ ಜೆಡಿಎಸ್ ಪಕ್ಷ ರಾಜ್ಯದ ಕನಿಷ್ಠ ೭೫ ಕ್ಷೇತ್ರಗಳಲ್ಲಿ ಜಯಗಳಿಸಲಿದೆ ಹಾಗೂ ಚಾಮುಂಡೇಶ್ವರಿ ಕ್ಷೇತ್ರ ಜೆಡಿಎಸ್‌ನ ಭದ್ರಕೋಟೆಯಾಗಿ ಮುಂದುವರೆಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಪಕ್ಷದಲ್ಲಿ ಯಾವುದೇ ಆಂತರಿಕ ಗೊಂದಲಗಳಿಲ್ಲ ಹಾಗೂ ಯಾವುದೇ ರಾಜಕೀಯ ಒತ್ತಡಗಳಿಗೆ ತಾವು ಮಣಿಯುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಕಾರ್ಯಕ್ರಮದಲ್ಲಿ ಪಕ್ಷದ ಯುವಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ, ಮಾಜಿ ಸಚಿವ ಸಾ.ರಾ.ಮಹೇಶ್, ಶಾಸಕ ಹರೀಶ್‌ಗೌಡ ಮತ್ತಿತರರು ಉಪಸ್ಥಿತರಿದ್ದರು.

****************

ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲೂಕಿನ ಐತಿಹಾಸಿಕ ಮಹಾಕೂಟದಲ್ಲಿ ಬಿಜೆಪಿ ವತಿಯಿಂದ ಆಯೋಜಿಸಲಾದ "ಪಂಡಿತ ದೀನದಯಾಳ್ ಉಪಾಧ್ಯಾಯ ಪ್ರಶಿಕ್ಷಣ ಮಹಾಭಿಯಾನ" ಕಾರ್ಯಕ್ರಮಕ್ಕೆ ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಅವರು ಇಂದು ಚಾಲನೆ ನೀಡಿದರು. ಮಹಾಕೂಟೇಶ್ವರ ದೇವಸ್ಥಾನದ ಆವರಣದಲ್ಲಿ ಜರುಗಿದ ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು, ಪಂಡಿತ ದೀನದಯಾಳ ಉಪಾಧ್ಯಾಯರ ಆದರ್ಶ ಹಾಗೂ ತತ್ವಗಳನ್ನು ಪಕ್ಷದ ಪ್ರತಿಯೊಬ್ಬ ಕಾರ್ಯಕರ್ತರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮಕ್ಕೂ ಮುನ್ನ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ದೇಶದಲ್ಲಿ ಪ್ರತಿವರ್ಷ ಸುಮಾರು ೧೩ ರಿಂದ ೧೪ ಲಕ್ಷ ವಿದ್ಯಾರ್ಥಿಗಳು ನೀಟ್ ಪರೀಕ್ಷೆ ಬರೆಯುತ್ತಿದ್ದು, ಭವಿಷ್ಯದಲ್ಲಿ ಅಕ್ರಮಗಳಿಗೆ ಆಸ್ಪದ ನೀಡದಂತೆ ಸಂಪೂರ್ಣ ಪರೀಕ್ಷಾ ಪ್ರಕ್ರಿಯೆಯನ್ನು ಆನ್‌ಲೈನ್ ಮೂಲಕ ನಡೆಸುವ ಕುರಿತು ಕೇಂದ್ರ ಸರ್ಕಾರ ಗಂಭೀರ ಚಿಂತನೆ ನಡೆಸುತ್ತಿದೆ ಎಂದರು. ಅರ್ಹ ವಿದ್ಯಾರ್ಥಿಗಳಿಗೆ ಯಾವುದೇ ಕಾರಣಕ್ಕೂ ಅನ್ಯಾಯವಾಗದಂತೆ ಸರ್ಕಾರ ಕಠಿಣ ಕ್ರಮಗಳನ್ನು ಕೈಗೊಂಡಿದ್ದು, ವಿದ್ಯಾರ್ಥಿಗಳು ಹಾಗೂ ಪೋಷಕರು ಆತಂಕ ಪಡುವ ಅಗತ್ಯವಿಲ್ಲ ಎಂದು ಭರವಸೆ ನೀಡಿದರು.

****************

ಯುವಪ್ರತಿಭೆಗಳು ಉತ್ತಮ ಕ್ರೀಡಾಪಟುಗಳಾಗಿ ಹೊರಹೊಮ್ಮಿ ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಬೆಳೆಯಬೇಕು ಎಂದು ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ವಿಜಯಪುರದಲ್ಲಿ ಇಂದು ಆರಂಭವಾದ ರಾಜ್ಯ ಮಟ್ಟದ ಬ್ಯಾಡ್ಮಿಂಟನ್ ಪಂದ್ಯಾವಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯ ಬ್ಯಾಡ್ಮಿಂಟನ್ ಅಸೋಸಿಯೇಶನ್ ಆಯೋಜಿಸಿರುವ ರಾಜ್ಯ ಮಟ್ಟದ ಬ್ಯಾಡ್ಮಿಂಟನ್ ಪಂದ್ಯಾವಳಿ ವಿಜಯಪುರಕ್ಕೆ

ಹೊಸ ರೂಪ ನೀಡಲಿದೆ. ಈ ಪಂದ್ಯಾವಳಿಯಿಂದಾಗಿ ಜಿಲ್ಲೆಯ ಕೀರ್ತಿ ಹೆಚ್ಚಲಿದ್ದು, ರಾಜ್ಯಮಟ್ಟದಲ್ಲೂ ಕ್ರೀಡಾಕ್ಷೇತ್ರಕ್ಕೆ ಉತ್ತೇಜನ ದೊರೆಯಲಿದೆ ಎಂದರು. ಬರಗಾಲ ಜಿಲ್ಲೆ ಎಂಬ ಕುಖ್ಯಾತಿಗೊಳಗಾಗಿದ್ದ ಈ ಜಿಲ್ಲೆ ಇಂದು ಬದಲಾಗಿದ್ದು, ಮುಂದೊಂದು ದಿನ ರಾಷ್ಟ್ರಮಟ್ಟದ ಕ್ರೀಡಾಕೂಟ ಆಯೋಜಿಸುವ ಮಟ್ಟಕ್ಕೆ ಬೆಳೆಯಲಿ ಎಂದು ಆಶಿಸಿದರು.

****************

ಹುಬ್ಬಳ್ಳಿಯ ಕರ್ನಾಟಕ ವೈದ್ಯಕೀಯ ಕಾಲೇಜ್ ಮತ್ತು ಸಂಶೋಧನಾ ಸಂಸ್ಥೆ – ಕೆಎಂಸಿಆರ್‌ಐಗೆ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಆಸ್ಪತ್ರೆಯ ತಾಯಿ ಮತ್ತು ಮಕ್ಕಳ ವಿಭಾಗ ಹಾಗೂ ಮಕ್ಕಳ ತೀವ್ರ ನಿಗಾ ಘಟಕಗಳಿಗೆ ಭೇಟಿ ನೀಡಿದ ಅವರು, ರೋಗಿಗಳಿಂದ ಅಹವಾಲು ಸ್ವೀಕರಿಸಿದರು. ಬಾಣಂತಿಯರಿಗೆ ಬಿಸಿನೀರಿನ ಸೌಲಭ್ಯವಿಲ್ಲದಿರುವುದು, ಹಾಸಿಗೆಗಳ ಕೊರತೆ ಹಾಗೂ ಸಿಬ್ಬಂದಿಯ ನಡವಳಿಕೆ ಕುರಿತು ಸಾರ್ವಜನಿಕರು ದೂರು ನೀಡಿದರು. ಈ ಸಮಸ್ಯೆಗಳನ್ನು ತಕ್ಷಣವೇ ಬಗೆಹರಿಸಿ ೧೫ ದಿನದೊಳಗೆ ಜಿಲ್ಲಾಧಿಕಾರಿಗಳಿಗೆ ವರದಿ ಸಲ್ಲಿಸುವಂತೆ ಆಸ್ಪತ್ರೆಯ ನಿರ್ದೇಶಕ ಡಾ. ಈಶ್ವರ ಹೊಸಮನಿ ಅವರಿಗೆ ನಿರ್ದೇಶನ ನೀಡಿದರು. ಬಳಿಕ ಮಾತನಾಡಿದ ಅವರು, ಆಸ್ಪತ್ರೆಯಲ್ಲಿ ತಿಂಗಳಿಗೆ ೧ ಸಾವಿರದ ೫೦೦ಕ್ಕೂ ಹೆಚ್ಚು ಹೆರಿಗೆಗಳಾಗುತ್ತಿದ್ದು, ಒತ್ತಡ ಹೆಚ್ಚಾಗಿದೆ. ಆದರೆ, ತಿಂಗಳಿಗೆ ಸರಾಸರಿ ೬ ತಾಯಂದಿರು ಮೃತಪಡುತ್ತಿರುವುದು ಕಳವಳಕಾರಿಯಾಗಿದ್ದು, 'ಶೂನ್ಯ ಸಾವು' ದಾಖಲಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತದೊಂದಿಗೆ ಚರ್ಚಿಸಲಾಗುವುದು ಎಂದರು.

****************

ವಿಜಯಪುರದ ಬಿ.ಎಲ್.ಡಿ.ಇ ಆಸ್ಪತ್ರೆ ಆವರಣದಲ್ಲಿ ಅಗ್ನಿ ಶಾಮಕ ಇಲಾಖೆ, ಗೃಹ ರಕ್ಷದ ದಳ, ಬಿ.ಎಲ್.ಡಿ.ಇ ಆಸ್ಪತ್ರೆ, ಸರ್ಕಾರಿ ಆಸ್ಪತ್ರೆಯ ವೈದ್ಯಕೀಯ ತಂಡ ಮತ್ತು ಎನ್.ಎನ್.ಸಿ ಘಟಕಗಳಿಂದ ಬಾಂಬ್ ಸ್ಫೋಟ ಸಂದರ್ಭದಲ್ಲಿ ತೆಗೆದುಕೊಳ್ಳಬಹುದಾದ ಮುನ್ನೆಚ್ಚರಿಕೆಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಅಣುಕು ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಬಾಂಬ್ ಸ್ಫೋಟ ಆದ ಸಮಯದಲ್ಲಿ ಕೈಗೊಳ್ಳಬೇಕಾದ ಪ್ರಾಥಮಿಕ ಉಪಚಾರಗಳ ಕುರಿತು ಅಣುಕು ಪ್ರದರ್ಶನ ಮುಖಾಂತರ ಒಳಗೆ ಸಿಲುಕೊಂಡಿರುವ ಸಾರ್ವಜನಿಕರನ್ನು ತುರ್ತಾಗಿ ರಕ್ಷಿಸಲು ಕ್ರಮವಹಿಸುವ ಜೊತೆಗೆ ವಿವಿಧ ಬಣ್ಣದ ಗುರುತುಗಳ ಮೂಲಕ ಮರಣ ಹೊಂದಿದವರು, ತೀವ್ರವಾಗಿ ಗಾಯಗೊಂಡವರು, ಕಡಿಮೆ ಗಾಯಗೊಂಡವರು ಮತ್ತು ಅಪಾಯದಿಂದ ಪಾರಾದವರನ್ನು ಗುರುತಿಸುವ ರೀತಿಯ ಕುರಿತು ಜನರಲ್ಲಿ ಅರಿವು ಮೂಡಿಸಲಾಯಿತು.

****************

ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮಗಳು ಸಮಾಜದಲ್ಲಿ ದುಂದು ವೆಚ್ಚಕ್ಕೆ ಕಡಿವಾಣ ಹಾಕುವುದರ ಜೊತೆಗೆ ಮಧ್ಯಮ ಹಾಗೂ ಬಡ ವರ್ಗದ ಕುಟುಂಬಗಳಿಗೆ ಆರ್ಥಿಕ ನೆರವಾಗುತ್ತವೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಅಭಿಪ್ರಾಯಪಟ್ಟಿದ್ದಾರೆ. ಯಾದಗಿರಿ ಜಿಲ್ಲೆಯ ಶಹಾಪುರ ತಾಲ್ಲೂಕಿನ ಭೀಮರಾಯನಗುಡಿ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಆಯೋಜಿಸಿದ್ದ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.  ಇದೇ ವೇಳೆ ೨೦೨೫-೨೬ನೇ ಸಾಲಿನ ಮುಖ್ಯಮಂತ್ರಿ ವಿಶೇಷ ಯೋಜನೆಯಡಿ ೫೦ ಲಕ್ಷ ರೂಪಾಯಿ ವೆಚ್ಚದಲ್ಲಿ ಖರೀದಿಸಿದ ೪೬ ತ್ರಿಚಕ್ರ ವಾಹನಗಳನ್ನು ಸಚಿವರು ಫಲಾನುಭವಿಗಳಿಗೆ ವಿತರಿಸಿದರು.

****************

ಇನ್ನು ಹವಾವರ್ತಮಾನ,

ಕರಾವಳಿ ಕರ್ನಾಟಕದ ಹೆಚ್ಚಿನ ಸ್ಥಳಗಳಲ್ಲಿ ದಕ್ಷಿಣ ಒಳನಾಡಿನ ಕೆಲವು ಸ್ಥಳಗಳಲ್ಲಿ ಹಾಗೂ ಉತ್ತರ ಒಳನಾಡಿನ ಒಂದೆರಡು ಕಡೆಗಳಲ್ಲಿ ಮಳೆಯಾಗಿದೆ. ಪ್ರಮುಖವಾಗಿ ದಕ್ಷಿಣ ಕನ್ನಡ ಜಿಲ್ಲೆಯ ಮುಲ್ಕಿಯಲ್ಲಿ ೬ ಸೆಂಟಿ ಮೀಟರ್ ಮಳೆಯಾಗಿದೆ. ಉಳಿದಂತೆ ಹಾವೇರಿಯಲ್ಲಿ ೫, ಮೂಡಬಿದ್ರೆ, ಶಿವಮೊಗ್ಗ, ಹುಂಚದಕಟ್ಟೆ, ಕೊಟ್ಟಿಗೆಹಾರದಲ್ಲಿ ತಲಾ ೪, ಉಪ್ಪಿನಂಗಡಿ, ಪುತ್ತೂರು, ಸುಳ್ಯ, ಶೃಂಗೇರಿ, ಭಾಗಮಂಡಲದಲ್ಲಿ ತಲಾ ೩ ಸೆಂಟಿ ಮೀಟರ್ ಮಳೆಯಾಗಿದೆ. ಕಲಬುರಗಿ ಜಿಲ್ಲೆಯಲ್ಲಿ ರಾಜ್ಯದಲ್ಲೇ ಗರಿಷ್ಠ ೪೨.೪ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ.  ಕರಾವಳಿ ಭಾಗದ ಸಮುದ್ರ ಪ್ರದೇಶಗಳಲ್ಲಿ ಇಂದು ಮತ್ತು ನಾಳೆ ಭಾರೀ ಗಾಳಿ ಹಾಗೂ ಅಲೆಗಳ ಅಬ್ಬರ ಹೆಚ್ಚಾಗುವ ಸಾಧ್ಯತೆ ಇರುವ ಹಿನ್ನೆಲೆ ಮೀನುಗಾರರಿಗೆ ಭಾರತೀಯ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದ್ದು, ಸಮುದ್ರಕ್ಕೆ ಇಳಿಯದಂತೆ ಸಲಹೆ ನೀಡಿದೆ.

****************

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೬.೩೫ ಕ್ಕೆ <>*><>**